**ದಿನಾಂಕ 08-09-2025 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಎಸ್.ಇ.ಜಿ ವಾದಿ ಪರ ವಕೀಲರಿಂದಃಃ**

ನಾನು ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು , ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

1. ಸಾಕ್ಷಿಯು ನೋಟರೀಕೃತ ವಂಶವೃಕ್ಷದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು.

2. ಸಾಕ್ಷಿಯು ಸರ್ವೆ ನಂ.32 ರ 24 ಗಣಕೀಕೃತ ಪಹಣಿ ಪತ್ರಿಕೆಗಳನ್ನು ನೋಡಿ ಗುರುತಿಸಿದ್ದು , ಅದನ್ನು ನಿಪಿ 2 ರಿಂದ ನಿಪಿ-25 ಎಂದು ಗುರುತಿಸಲಾಯಿತು.

3. ಸಾಕ್ಷಿಯು ಒಂದು ಮ್ಯುಟೇಶನ್ ರಿಜಿಸ್ಟರ್ ನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 26 ಎಂದು ಗುರುತಿಸಲಾಯಿತು.

4. ಸಾಕ್ಷಿಯು ಸರ್ವೆ ನಂ.32 ರ ಒಂದು ಕೈಬರಹದ ಪಹಣಿ ಪತ್ರಿಕೆಗಳನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 27 ಎಂದು ಗುರುತಿಸಲಾಯಿತು.

5. ಸಾಕ್ಷಿಯು ಎರಡು ಮ್ಯುಟೇಶನ್ ರಿಜಿಸ್ಟರ್ ನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ–28 ರಿಂದ ನಿಪಿ–29 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.**

(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು**).

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.